**ಕರ್ನಾಟಕ ಸರ್ಕಾರ**

**ತಾಂತ್ರಿಕ ಶಿಕ್ಷಣ ಇಲಾಖೆ**

**DTE-ADMI0ACM2/26/2025**

ಆಯುಕ್ತರ ಕಛೇರಿ,
ತಾಂತ್ರಿಕ ಶಿಕ್ಷಣ ಭವನ,
ಅರಮನೆ ರಸ್ತೆ, ಬೆಂಗಳೂರು-560 001.
ದಿನಾಂಕ:02-06-2025.

**-:: ಸು ತ್ತೋಲೆ::-**

**ವಿಷಯ:** 2025-26ನೇ ಸಾಲಿನ ಪ್ರಥಮ ಸೆಮಿಸ್ಟರ್ ಡಿಪ್ಲೋಮಾ ಪ್ರವೇಶ ಸಂಬಂಧ ಖಾಸಗಿ ಪಾಲಿಟೆಕ್ನಿಕ್‌ಗಳಿಗೆ ಪ್ರವೇಶಾವಧಿಯನ್ನು ವಿಸ್ತರಿಸುವ ಬಗ್ಗೆ.

**ಉಲ್ಲೇಖ:** ಈ ಕಛೇರಿಯ ಪ್ರವೇಶಾಧಿಸೂಚನೆ ಪತ್ರ ಸಂ. DTE-ADMI0ACM2/26/2025, ದಿ:05-05-2025.

*******

ಉಲ್ಲೇಖಿತ ಈ ಕಛೇರಿಯ ಪ್ರವೇಶಾಧಿಸೂಚನೆಯಲ್ಲಿ 2025-26ನೇ ಸಾಲಿನ ಪ್ರಥಮ ಡಿಪ್ಲೋಮಾ ಪ್ರವೇಶಕ್ಕೆ ಸಂಬಂಧಿಸಿದಂತೆ, ರಾಜ್ಯದ ಎಲ್ಲಾ ಖಾಸಗಿ ಪಾಲಿಟೆಕ್ನಿಕ್‌ಗಳಲ್ಲಿನ ಪ್ರವೇಶಕ್ಕೆ ದಿನಾಂಕ:31-05-2025 ಕೊನೆಯ ದಿನಾಂಕವನ್ನಾಗಿ ನಿಗಧಿಪಡಿಸಲಾಗಿತ್ತು.

ಆದರೆ, ಪ್ರವೇಶ ಅವಧಿಯನ್ನು ವಿಸ್ತರಿಸಲು ಪಾಲಿಟೆಕ್ನಿಕ್‌ನ ಪ್ರಾಂಶುಪಾಲರುಗಳು ಕೋರಿರುವುದನ್ನು ಪರಿಗಣಿಸಿ ಒಟ್ಟಾರೆ ಸಂಸ್ಥೆಗಳ ಹಾಗೂ ವಿದ್ಯಾರ್ಥಿಗಳ ಶೈಕ್ಷಣಿಕ ಹಿತದೃಷ್ಟಿಯ ಮೇರೆಗೆ ಪ್ರವೇಶಾವಧಿಯನ್ನು **ದಿ:30-06-2025 ರವರೆಗೆ** ವಿಸ್ತರಿಸಿ ಅನುಮತಿ ನೀಡಲಾಗಿದೆ.

ಪ್ರಾಂಶುಪಾಲರು ಕೂಡಲೇ ಈ ಬಗ್ಗೆ ಕ್ರಮ ತೆಗೆದುಕೊಂಡು ಸ್ಥಳೀಯವಾಗಿ ಪತ್ರಿಕಾ ಪ್ರಕಟಣೆಯನ್ನು ನೀಡುವುದು. ಸಂಸ್ಥೆಯ ಸೂಚನಾಫಲಕದಲ್ಲಿ ಪ್ರಕಟಿಸಿ ವಿದ್ಯಾರ್ಥಿ/ಪೋಷಕರುಗಳ ಗಮನಕ್ಕೆ ತರಲು ಸೂಚಿಸಿದೆ. ಪ್ರಯುಕ್ತ, ಇದನ್ನು ಖಾಸಗಿ/ಅನುದಾನಿತ ಪಾಲಿಟೆಕ್ನಿಕ್‌ನ ಪ್ರಿನ್ಸಿಪಾಲರು ಗಮನದಲ್ಲಿರಿಸಿಕೊಂಡು ನಿಯಮಗಳ ಪ್ರಕಾರ ಪ್ರವೇಶವನ್ನು ಪೂರೈಸುವಲ್ಲಿ ಕ್ರಮ ತೆಗೆದುಕೊಳ್ಳಬೇಕೆಂದು ತಿಳಿಸಲಾಗಿದೆ.

Digitally signed by
MANJUSHREE N
Date: 05-06-2025
17:29:59

**ಆಯುಕ್ತರು**
**ಕಾಲೇಜು ಮತ್ತು ತಾಂತ್ರಿಕ ಶಿಕ್ಷಣ ಇಲಾಖೆ,**
**ಬೆಂಗಳೂರು**

**ಇವರಿಗೆ,**

***ಎಲ್ಲಾ ಖಾಸಗಿ ಹಾಗೂ ಅನುದಾನಿತ ಪಾಲಿಟೆಕ್ನಿಕ್‌ಗಳ ಪ್ರಿನ್ಸಿಪಾಲರಿಗೆ - ಸೂಕ್ತ ಮಾಹಿತಿಗಾಗಿ ಮತ್ತು ಅನುಸರಣೆಗಾಗಿ***

**<u>ಪ್ರತಿ ಇವರಿಗೆ ಮಾಹಿತಿಗಾಗಿ:</u>**

1. ಆಯುಕ್ತರವರ ಆಪ್ತಶಾಖೆಗೆ.
2. ನಿರ್ದೇಶಕರವರ ಆಪ್ತಶಾಖೆಗೆ.
3. ಜಂಟಿ ನಿರ್ದೇಶಕರು(ಆಡಳಿತ), ತಾಂತ್ರಿಕ ಶಿಕ್ಷಣ ಆಯುಕ್ತಾಲಯ, ಬೆಂಗಳೂರು.
4. ಇ-ಗವರ್ನೆನ್ಸ್ ವಿಭಾಗಕ್ಕೆ - ವೆಬ್‌ಸೈಟ್‌ನಲ್ಲಿ ಪ್ರಚುರಪಡಿಸುವುದು.
5. ಡಿವಿಪಿ(2) ವಿಭಾಗಕ್ಕೆ
6. ಇಆರ್‌ಎಸ್(3) ವಿಭಾಗಕ್ಕೆ – ಸಿಬಿಎಸ್‌ಇ/ಐಸಿಎಸ್‌ಇ ಹಾಗೂ ಕರ್ನಾಟಕೇತರ ವಿದ್ಯಾರ್ಥಿಗಳೀಗೆ ಅರ್ಹತಾ ಪ್ರಮಾಣ ಪತ್ರ ವಿತರಿಸುವ ಬಗ್ಗೆ ಕ್ರಮತೆಗೆದುಕೊಳ್ಳುವುದು.
7. ಕಛೇರಿ ಪ್ರತಿ.